ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 654 (1070)

ಶ್ರೀ ಬಸನಗೌಡ ರಾ.ಪಾಟೀಲ್ (ವಿಜಾಪುರ):- ಮಾನ್ಯ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) 1994-95ನೇ ಮತ್ತು 1995-96ನೇ ಸಾಲಿನಲ್ಲಿ ವಿಜಾಪುರ ಜಿಲ್ಲೆಯಲ್ಲಿ ಹೊಸದಾಗಿ ಮಂಜೂರಾಗಿರುವ ಕೆರೆಗಳು ಎಷ್ಟು? (ವಿಧಾನಸಭೆ ಮತ ಕ್ಷೇತ್ರವಾರು ಮಾಹಿತಿ ನೀಡುವುದು)

ಆ) ಯಾವ ಯಾವ ಊರುಗಳಲ್ಲಿ ಹೊಸದಾಗಿ ಕೆರೆಗಳನ್ನು ಮಂಜೂರು ಮಾಡಲಾಗಿದೆ?

ಇ) ಹೊಸ ಕೆರೆಗಳ ನಿರ್ಮಾಣಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ?

ಈ) ಹಾಗಿದ್ದಲ್ಲಿ, ಸದರಿ ಕೆರೆಗಳನ್ನು ತೀವ್ರವಾಗಿ ಮುಗಿಸಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ತಿಪ್ಪೇಸ್ವಾಮಿ (ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವರು):-

ಅ)

	1994-95	1995-96
ನೀರಾವರಿ ಇಲಾಖಾ ವತಿಯಿಂದ		
ಮಂಜೂರಾದ ಹೊಸ ಕೆರೆಗಳ ಸಂಖ್ಯೆ	6	3
ಜಿಲ್ಲಾ ಪಂಚಾಯತ್ ವತಿಯಿಂದ		
ಮಂಜೂರಾದ ಹೊಸ ಕೆರೆಗಳ ಸಂಖ್ಯೆ	1	-

(ವಿವರ ಲಗತ್ತಿಸಿದೆ).

ಆ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಈ) ಕಾಮಗಾರಿಗಳನ್ನು ಶೀಘ್ರವಾಗಿ ಪೂರ್ಣಗೊಳಿಸಲು ಕೈಗೊಳ್ಳಲಾಗುವುದು.

ವಿಷಯ:- ವಿದ್ಯುತ್ ಟ್ರಾನ್ಸ್‌ಫಾರ್ಮರಗಳು ಸುಟ್ಟಿರುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 676 (1068)

ಶ್ರೀ ಎಸ್.ಪಿ.ಮುದ್ದಹನುಮೇಗೌಡ ಕುಣಿಗಲ್:- ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯುತ್ ಟ್ರಾನ್ಸ್‌ಫಾರ್ಮರುಗಳು ಸುಟ್ಟುಹೋಗಿ ರೈತರಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ.

ಆ) ಈ ತೊಂದರೆಯನ್ನು ಪರಿಹರಿಸುವಲ್ಲಿ ಸರ್ಕಾರದವರು ಕೈಗೊಂಡ ಕ್ರಮಗಳೇನು.

ಶ್ರೀ ಶರಣಪ್ಪ ಬಸಪ್ಪ ದರ್ಶನಪುರ್ (ಇಂಧನ ರಾಜ್ಯ ಸಚಿವರು):-

ಅ) ಹೌದು.

ಆ) ಮಂಡಳಿಯು ಟ್ರಾನ್ಸ್‌ಫಾರ್ಮರುಗಳನ್ನು ಒದಗಿಸುವ ಬಗ್ಗೆ ಕ್ರಮವನ್ನು ಕೈಗೊಳ್ಳಲಾಗಿದೆ. ಟ್ರಾನ್ಸ್‌ಫಾರ್ಮರುಗಳು ಬೇಕಾಗುವ ವಿಭಾಗಗಳಿಗೆ ಅವುಗಳನ್ನು ಒದಗಿಸಲಾಗುವುದು.

ಮಂಡಳಿಯು ಸುಟ್ಟುಹೋದ ಟ್ರಾನ್ಸ್‌ಫಾರ್ಮರ್‌ಗಳನ್ನು ಬದಲಾಯಿಸುವಾಗ ಹಿರಿತನವನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ತನ್ನ ಕ್ಷೇತ್ರದ ಸಿಬ್ಬಂದಿ ವರ್ಗದವರಿಗೆ ನಿರ್ದೇಶನ ನೀಡಿದೆ. ಆದರೆ ಕುಡಿಯುವ ನೀರು ಸರಬರಾಜು ಸ್ಥಾವರಗಳಿಗೆ ವಿದ್ಯುತ್ ಪೂರೈಕೆ ಮಾಡುವ ಟ್ರಾನ್ಸ್‌ಫಾರ್ಮರುಗಳು ಸುಟ್ಟು ಹೋದಲ್ಲಿ ಅವುಗಳನ್ನು ಪ್ರಥಮ ಆದ್ಯತೆಯ ಮೇರೆಗೆ ಬದಲಾಯಿಸಲಾಗುವುದು.

ವಿಷಯ:- ಪೋಲೀಸ್ ಇಲಾಖೆಯ ಆಧುನಿಕರಣ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 721 (740)

ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ):- ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪೋಲಿಸ್ ಇಲಾಖೆಯನ್ನು ಆಧುನಿಕರಣಗೊಳಿಸಲು ಸರ್ಕಾರದವರು ನಿರ್ಧರಿಸಿದ್ದಾರೆಯೇ?

ಆ) ರಾಜ್ಯದಲ್ಲಿ ಆರಕ್ಷಕ ಠಾಣೆಗಳ ಒಟ್ಟು ಸಂಖ್ಯೆ ಎಷ್ಟು?

ಇ) ರಾಜ್ಯದಲ್ಲಿರುವ ಪೋಲೀಸರ ಸಂಖ್ಯೆ ಎಷ್ಟು (ದರ್ಜೆವಾರು ಮತ್ತು ಜಿಲ್ಲಾವಾರು ವಿವರ ಒದಗಿಸುವುದು)

ಈ) ರಾಜ್ಯದಲ್ಲಿ ನಡೆಯುತ್ತಿದೆ ಎನ್ನಲಾದ ದರೋಡೆ, ಸುಲಿಗೆ, ರೌಡಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್.ರೋಷನ್‌ಬೇಗ್ (ಗೃಹ ರಾಜ್ಯ ಸಚಿವರು):-

ಅ) ಹೌದು, ಆಧುನೀಕರಣಗೊಳಿಸಲು ಈ ಕೆಳಕಂಡ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ.

(1) ಜಿಲ್ಲಾ ಮಟ್ಟದವರೆವಿಗೂ ಗಣಕೀಕರಣ ಗೊಳಿಸಲಾಗಿದೆ.

(2) ಪೋಲೀಸ್ ಮತ್ತು ಸಾರ್ವಜನಿಕ ಸಂಬಂಧವನ್ನು ಉತ್ತಮಗೊಳಿಸಲು,